**ಆಯುಷ ಘಟಕ, ಜೆನರಿಕ್ ಔಷಧ ಮಳಿಗೆ ಸ್ಥಾಪನೆ**

**198(319); ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ)**

ಅ) ಜಿಲ್ಲೆಯ ತಾಲ್ಲೂಕು ಕೇಂದ್ರಗಳಲ್ಲಿ ಆಯುಷ್ ಘಟಕ ಹಾಗೂ ಜೆನರಿಕ್ ಔಷಧ ಮಳಿಗೆಯನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಆ) ಹಾಗಿದ್ದಲ್ಲಿ, ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕು ಕೇಂದ್ರದ ಆಸ್ಪತ್ರೆಯಲ್ಲಿ ಆಯುಷ್ ಘಟಕ ಹಾಗೂ ಜೆನರಿಕ್ ಔಷಧ ಮಳಿಗೆ ಸ್ಥಾಪಿಸಲು ಉದ್ದೇಶಿಸಿದೆಯೇ;

ಇ) ಪ್ರಾರಂಭಿಸಲು ಉದ್ದೇಶಿಸಿಲ್ಲವಾದಲ್ಲಿ ಯಾವ ಕಾಲ ಮಿತಿಯೊಳಗೆ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು. (ವಿವರ ನೀಡುವುದು)?

**ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)**

ಅ) **ಮತ್ತು ಆ)** 2013–14ನೇ ಸಾಲಿನ ಬಜೆಟ್ ಭಾಷಣದಲ್ಲಿ ಘೋಷಿಸಿರುವಂತೆ ರಾಜ್ಯದ ಪ್ರತಿ ಜಿಲ್ಲೆಯ ಒಂದು ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ 10 ಹಾಸಿಗೆಗಳ ಆಯುಷ್ ಘಟಕಗಳನ್ನು ರಾಜ್ಯವಲಯ ಯೋಜನೆಯಡಿ ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಈ ಪ್ರಸ್ತಾವನೆಯಲ್ಲಿ ಯಾವುದೇ ಆಯುಷ್ ಘಟಕ ಇಲ್ಲದ ಸಾರ್ವಜನಿಕ ಆಸ್ಪತ್ರೆಗಳಲ್ಲಿ 10 ಹಾಸಿಗೆಯ ಆಯುಷ್ ಘಟಕಗಳನ್ನು ಸ್ಥಾಪಿಸಲು 30 ತಾಲ್ಲೂಕುಗಳನ್ನು ಗುರುತಿಸಿಕೊಳ್ಳಲಾಗಿದೆ.

2013–14ನೇ ಸಾಲಿನ ಆಯವ್ಯಯದ ಘೋಷಣೆಯಂತೆ ರಾಜ್ಯದ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳ ಆವರಣಗಳಲ್ಲಿ ಜೆನರಿಕ್ ಔಷಧ ಮಳಿಗೆ ಸ್ಥಾಪಿಸುವ ನಿಟ್ಟಿನಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟ ಸಂಸ್ಥೆಗಳಾದ ಹೆಚ್.ಎಲ್.ಎಲ್. ಮತ್ತು ಕೆ.ಎ.ಪಿ.ಎಲ್.ಗಳ ಮೂಲಕ ಕೈಗೊಳ್ಳಲು ಸದರಿ ಸಂಸ್ಥೆಗಳೊಡನೆ ಸಮಾಲೋಚಿಸಲಾಗಿದೆ. ಪ್ರಥಮ ಹಂತದಲ್ಲಿ 30 ಜಿಲ್ಲಾ ಆಸ್ಪತ್ರೆಗಳು

ಹಾಗೂ ಪ್ರತಿ ಜಿಲ್ಲೆಗೆ ಒಂದರಂತೆ 30 ತಾಲ್ಲೂಕು ಆಸ್ಪತ್ರೆಗಳಲ್ಲಿ ಜೆನರಿಕ್ ಔಷಧ ಮಳಿಗೆಯನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.

ಜೆನರಿಕ್ ಔಷಧ ಮಳಿಗೆಯಲ್ಲಿ ಆಯುಷ್ ಔಷಧಿ ದೊರಕುವ ಸೌಲಭ್ಯವನ್ನು ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಇ) ಈ ವರ್ಷದ ಅಂತ್ಯದೊಳಗೆ ಜೆನರಿಕ್ ಔಷಧಿ ಮಳಿಗೆಗಳನ್ನು ಪ್ರಾರಂಭಿಸುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ.

## ಆಸ್ಪತ್ರೆಗಳ ಸ್ಥಾಪನೆ

**199(301); ಶ್ರೀ ಮಲ್ಲಿಕಾರ್ಜುನ ಸಿದ್ದಾಮಪ್ಪ ಖೂಬಾ (ಬಸವ ಕಲ್ಯಾಣ)**

ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶದ ವಿವಿಧ ಜಿಲ್ಲೆಗಳಲ್ಲಿ ಬರುವ ಆಸ್ಪತ್ರೆಗಳು ಮತ್ತು ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು?

ಆ) ಈ ಭಾಗದ ಜಿಲ್ಲೆಗಳ ಜನಸಂಖ್ಯೆಗೆ ಅನುಗುಣವಾಗಿ ಇನ್ನೂ ಎಷ್ಟು ಆಸ್ಪತ್ರೆಗಳು ಮತ್ತು ಆರೋಗ್ಯ ಕೇಂದ್ರಗಳ ಅವಶ್ಯಕತೆ (ವಿವರ ಒದಗಿಸುವುದು)

ಇ) ಪ್ರಸಕ್ತ ಸಾಲಿನಲ್ಲಿ ಈ ಭಾಗದ ಜಿಲ್ಲೆಗಳಲ್ಲಿ ಹೊಸದಾಗಿ ಎಲ್ಲೆಲ್ಲಿ ಆಸ್ಪತ್ರೆಗಳನ್ನು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲಾಗುವುದು?

**ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)**

ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 6 ಜಿಲ್ಲಾ ಆಸ್ಪತ್ರೆಗಳು, 25 ತಾಲ್ಲೂಕು ಮಟ್ಟದ ಸಾರ್ವಜನಿಕ ಆಸ್ಪತ್ರೆಗಳು, 51 ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು 316 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ.